# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1148
2. ಸದಸ್ಯರ ಹೆಸರು : ಡಾ॥ ತೇಜಸ್ವಿನಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 20-12-2018
4. ಉತ್ತರಿಸುವವರು : ಮುಖ್ಯಮಂತ್ರಿಯವರು

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಸಚಿವಾಲಯವೂ ಸೇರಿದಂತೆ ರಾಜ್ಯದಾದ್ಯಂತ ಸರ್ಕಾರಿ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ಸಂಖ್ಯೆ ಎಷ್ಟು;</td><td>ರಾಜ್ಯದಾದ್ಯಂತ ಸರ್ಕಾರಿ ಕಛೇರಿಗಳಲ್ಲಿ ಒಟ್ಟು 5,20,750 ಅಧಿಕಾರಿ/ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.</td></tr>
<tr><td>ಆ)</td><td>ಕಛೇರಿಯ ಅವಧಿ ಮೀರಿ ಹೆಚ್ಚುವರಿಯಾಗಿ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; ಯಾವ್ಯಾವ ಇಲಾಖೆಗಳು ಕಾರ್ಯ ನಿರ್ವಹಿಸುತ್ತಿವೆ;</td><td>ರಾಜ್ಯದಲ್ಲಿ ಎಲ್ಲ ವೃಂದಗಳಲ್ಲಿ 2,52,423 ಹುದ್ದೆಗಳು ಖಾಲಿ ಇದ್ದು, ಪ್ರಭಾರದಲ್ಲಿರಿಸಿರುವ ಅಧಿಕಾರಿ/ ನೌಕರರು ಕಛೇರಿ ಅವಧಿ ಮೀರಿ ಕರ್ತವ್ಯ ನಿರ್ವಹಿಸಬೇಕಾಗಿರುತ್ತದೆ. ನಿರ್ದಿಷ್ಟ ದಿನಾಂಕ / ಅವಧಿಯೊಳಗೆ ಮುಗಿಸಲೇಬೇಕಾದ ಕಾರ್ಯಕ್ರಮ / ಕೆಲಸಗಳನ್ನು ನಿರ್ವಹಿಸಬೇಕಾದಂತಹ ಸಂದರ್ಭಗಳಲ್ಲಿ ಕಛೇರಿ ಅವಧಿ ಮೀರಿ ಹೆಚ್ಚುವರಿಯಾಗಿ ಕಾರ್ಯನಿರ್ವಹಿಸಲಾಗುತ್ತಿದೆ. ಇಂತಹ ಅಧಿಕಾರಿ/ ಸಿಬ್ಬಂದಿ ವರ್ಗದ ಸಂಖ್ಯೆಯನ್ನು ನಿರ್ದಿಷ್ಟವಾಗಿ ಹೇಳಲಾಗದು.</td></tr>
<tr><td>ಇ)</td><td>ಹೆಚ್ಚುವರಿಯಾಗಿ ಕೆಲಸ ಮಾಡುವ ಸಿಬ್ಬಂದಿಯ ಕಾರ್ಯದೊತ್ತಡ ತಗ್ಗಿಸಲು ಕೈಗೊಂಡಿರುವ ಕ್ರಮಗಳೇನು;</td><td rowspan="2">ಖಾಲಿ ಇರುವ ನೇರ ನೇಮಕಾತಿ ಹಾಗೂ ಪದೋನ್ನತಿಯಿಂದ ತುಂಬಬೇಕಾದ ಹುದ್ದೆಗಳನ್ನು ಭರ್ತಿ ಮಾಡುವುದರ ಮೂಲಕ ಹೆಚ್ಚುವರಿಯಾಗಿ ಕೆಲಸ ಮಾಡುವ ಅಧಿಕಾರಿ / ಸಿಬ್ಬಂದಿಗಳ ಕಾರ್ಯದೊತ್ತಡ ತಗ್ಗಿಸಲು ಉದ್ದೇಶಿಸಿದೆ.</td></tr>
<tr><td>ಈ)</td><td>ಹೆಚ್ಚುವರಿ ಕೆಲಸ ಮಾಡುವ ಅಧಿಕಾರಿ/ ಸಿಬ್ಬಂದಿಗೆ ಪೂರಕವಾಗಿ, ಪ್ರೇರಕವಾಗಿ ಯಾವ ರೀತಿಯ ಸ್ಪಂದನೆಯನ್ನು ಸರ್ಕಾರ ತೋರುತ್ತಿದೆ?</td></tr>
</table>

ಸಿಆಸುಇ 152 ರಾಸವಿ 2018

(ಹೆಚ್.ಡಿ. ಕುಮಾರಸ್ವಾಮಿ)
ಮುಖ್ಯಮಂತ್ರಿ